ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರಾಜ್ಯದಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಮಿಲ್ಲೆಟ್, ಜೋಳ, ರಾಗಿ ಮತ್ತು ಇತರೆ ಪೌಷ್ಠಿಕ ಆಹಾರ ಪೂರೈಸುವ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು):-

1559 (1913) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ಭಾರತದ ಪ್ರಧಾನ ಮಂತ್ರಿಗಳ ಕನಸಿನ ಯೋಜನೆಯಾದ `ಮಿಲ್ಲೆಟ್ ಕ್ರಾಂತಿ' ಯೋಜನೆಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪೌಷ್ಠಿಕ ಆಹಾರಗಳಾದ ಮಿಲ್ಲೆಟ್, ಜೋಳ, ರಾಗಿ ಮುಂತಾದವುಗಳನ್ನು ನ್ಯಾಯ ಬೆಲೆ ಅಂಗಡಿಗಳ ಮುಖೇನ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಸಾರ್ವಜನಿಕ ಪಡಿತರ ಮೂಲಕ ವಿತರಿಸಲು ಅಗತ್ಯವಿರುವಷ್ಟು ಮಿಲ್ಲೆಟ್, ರಾಗಿ, ಜೋಳ ರಾಜ್ಯದಲ್ಲಿ ಲಭ್ಯವಿದೆಯೇ ? (ಪೂರ್ಣ ಮಾಹಿತಿ ನೀಡುವುದು)